ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001**

E-Mail: prydirector.edu.sgkar@nic.in

ಸಂಖ್ಯೆ : ಸಿ7(8)ಪ್ರಾಶಿಅ/ಆರ್.ಟಿ.ಇ/ಶುಲ್ಕ ಮರುಪಾವತಿ/2016-17 ದಿನಾಂಕ: 18/10/2016

**: : ಸುತ್ತೋಲೆ : :**

**ವಿಷಯ: 2016-17ನೇ ಸಾಲಿನ ಶುಲ್ಕ ಮರುಪಾವತಿಗೆ ಸಂಬಂಧಿಸಿದಂತೆ ಪೂರ್ವ ಸಿದ್ದತೆ ಮಾಡಿಕೊಳ್ಳುವ ಬಗ್ಗೆ.**

* * * * *

2016-17ನೇ ಸಾಲಿನ ಶಿಕ್ಷಣ ಹಕ್ಕು ಕಾಯಿದೆ ಅಡಿ ಪ್ರವೇಶ ಪಡೆದು ವ್ಯಾಸಂಗ ಮುಂದುವರೆಸಿರುವ ಮಕ್ಕಳ ಮಾಹಿತಿಯನ್ನು ಆಯುಕ್ತಾಲಯದ ಹಂತದಲ್ಲಿ ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳು ಅಪ್‌ಡೇಟ್ ಮಾಡಿಸಲು **ದಿನಾಂಕ: 28/10/2016ಕ್ಕೆ** ಅಂತಿಮವಾಗಿ ಕಾಲಾವಕಾಶ ನೀಡಲಾಗಿದೆ. ಆನ್‌ಲೈನ್‌ನಲ್ಲಿ ವಿದ್ಯಾರ್ಥಿಗಳ ಮಾಹಿತಿ ಇಲ್ಲದಿದ್ದಲ್ಲಿ ಶುಲ್ಕ ಮರುಪಾವತಿಗೆ ಪರಿಗಣಿಸುವುದಿಲ್ಲ ಎಂಬುದನ್ನು ಮತ್ತೊಮ್ಮೆ ತಿಳಿಸಲಾಗಿದೆ.

2016-17ನೇ ಸಾಲಿನಿಂದ ಶುಲ್ಕಮರುಪಾವತಿ ಮಾಡಲು ತಂತ್ರಾಂಶ ಅಭಿವೃದ್ಧಿ ಪಡಿಸಲಾಗುತ್ತಿದೆ. ಶುಲ್ಕಮರುಪಾವತಿಗಾಗಿ ಒಂದಕ್ಕಿಂತ ಹೆಚ್ಚು ಶಾಲೆಗಳನ್ನು ನಡೆಸುತ್ತಿರುವ ಕೆಲವು ಆಡಳಿತ ಮಂಡಳಿಗಳು ಶಾಲಾವಾರು ಆಡಿಟ್ ವರದಿ ಸಲ್ಲಿಸದೇ ಟ್ರಸ್ಟ್ ಅಥವಾ ಆಡಳಿತ ಮಂಡಳಿಯ ಅಧ್ಯಕ್ಷರು ಅಥವಾ ಕಾರ್ಯದರ್ಶಿಯವರ ಹೆಸರಿನಲ್ಲಿ ಬ್ಯಾಂಕ್ ಖಾತೆ ತೆರೆದು ಶುಲ್ಕ ಮರುಪಾವತಿ ಪಡೆದಿರುವುದು ಗಮನಕ್ಕೆ ಬಂದಿದೆ.

ಆನ್‌ಲೈನ್ ತಂತ್ರಾಂಶದ ಮೂಲಕ ಶಾಲೆಯ ಹೆಸರಿಗೆ ನೇರವಾಗಿ ಶುಲ್ಕ ಮರುಪಾವತಿಯನ್ನು ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದೆ. ಆದ ಕಾರಣ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ-2009ರ ಸೆಕ್ಷನ್ 12(2) ಹಾಗೂ ಕರ್ನಾಟಕ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು-2012ರ ನಿಯಮ 8(2)ರ ಪ್ರಕಾರ ಶುಲ್ಕ ಮರುಪಾವತಿ ಕೋರುವ ಪ್ರತಿಯೊಂದು ಶಾಲೆಯು ಪ್ರತ್ಯೇಕವಾಗಿ ಶಾಲೆಯ ಹೆಸರಿನಲ್ಲಿ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಉಳಿತಾಯ ಖಾತೆ ತೆರೆಯಲು ಸೂಚಿಸಲಾಗಿದೆ. ಅಲ್ಲದೇ, ಒಂದಕ್ಕಿಂತ ಹೆಚ್ಚು ಶಾಲೆಗಳನ್ನು ಹೊಂದಿರುವ ಆಡಳಿತ ಮಂಡಳಿಗಳಿಂದ ಶಾಲಾವಾರು ಆಡಿಟ್ ವರದಿಯನ್ನು ಸಲ್ಲಿಸಲು ತಿಳಿಸಲಾಗಿದೆ. ಈ ಹಿನ್ನಲೆಯಲ್ಲಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು 2016-17ನೇ ಸಾಲಿನ ಶುಲ್ಕ ಮರುಪಾವತಿಗೆ ಪೂರ್ವ ಸಿದ್ದತೆ ಮಾಡಿಕೊಳ್ಳಲು ತಿಳಿಸಿದೆ.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ.

ಪ್ರತಿಯನ್ನು:

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಇವರಿಗೆ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ವಲಯ/ತಾಲ್ಲೂಕು ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರ ಮುಖಾಂತರ) ಸೂಕ್ತ ಕ್ರಮಕ್ಕಾಗಿ.
3. ಕಛೇರಿ ಪ್ರತಿ.